ವಿಷಯ : ಬೈಲಹೊಂಗಲ ತಾಲ್ಲೂಕಿನ ಬೈಲುವಾಡ ಹಾಗೂ ಸವದತ್ತಿ ತಾಲ್ಲೂಕಿನ ಸುತ್ತಗಟ್ಟಿ ಗ್ರಾಮಗಳಲ್ಲಿ ಮಂಜೂರಾದ ಬಿಸಿಎಂ ಹಾಸ್ಟೆಲ್ ಪ್ರಾರಂಭವಾಗದೆ ಇರುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 327(705)

ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳಗಾಂ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಬೈಲುವಾಡ ಹಾಗೂ ಸವದತ್ತಿ ತಾಲ್ಲೂಕಿನ ಸುತ್ತಗಟ್ಟಿ ಗ್ರಾಮದಲ್ಲಿ ಇದುವರೆಗೂ ಬಿಸಿಎಂ ಹಾಸ್ಟೆಲ್ ಪ್ರಾರಂಭವಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಮಂಜೂರಾದ ಹಾಸ್ಟೆಲ್‌ಗಳನ್ನು ಜಿಲ್ಲಾ ಪರಿಷತ್ತಿನ ಉಳಿತಾಯ ಹಣದಲ್ಲಿ ಪ್ರಾರಂಭಿಸಲು ಸರ್ಕಾರದವರು ಜಿಲ್ಲಾ ಪರಿಷತ್ತಿಗೆ ಆದೇಶ, ನೀಡಿದರೂ ಸಹ ಜಿಲ್ಲಾ ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಇಲಾಖಾಧಿಕಾರಿಗಳು ಈ ವಿಷಯದಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಇದೇ ವರ್ಷದಿಂದ ಬೈಲುವಾಡ ಹಾಗೂ ಸುತ್ತಕಟ್ಟೆ ಹಾಸ್ಟೆಲುಗಳನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಸಿಬ್ಬಂದಿ ಮಂಜೂರಾತಿ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದ್ದು, ಶೀಘ್ರವಾಗಿ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಇ) ಅದು ಉತ್ತರದಿಂದ ಉದ್ಭವಿಸುವುದಿಲ್ಲ.

ವಿಷಯ : ಬೈಲಹೊಂಗಲ ನಗರದಲ್ಲಿ ಹೌಸಿಂಗ್ ಬೋರ್ಡ್‌ಮನ್‌ಗಳು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 328(704)

ಶ್ರೀ ಶಿವಾನಂದ ಹೆಚ್ ಕೌಜಲಗಿ (ಬೈಲಹೊಂಗಲ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಬೈಲಹೊಂಗಲ ನಗರದಲ್ಲಿ ಕರ್ನಾಟಕ ಹೌಸಿಂಗ್ ಬೋರ್ಡ್‌ನಿಂದ ಮನೆಗಳನ್ನು ಕಟ್ಟಲು ಅರ್ಜಿಗಳನ್ನು ಕರೆದಿರುವುದು ನಿಜವೇ?

ಆ) ಈ ಹಿಂದೆ ಅರ್ಜಿಗಳನ್ನು ಕರೆದಿದ್ದರೂ ಸಹ ಇದುವರೆವಿಗೂ ಹೌಸಿಂಗ್ ಬೋರ್ಡ್ ಮನೆಗಳನ್ನು ಕಟ್ಟದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದವರು ಕೂಡಲೇ ಕ್ರಮ ಕೈಗೊಳ್ಳುವರೆ?